**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಹೊಳಲ್ಕೆರೆ.**

**ಸಿ.ಸಿ. 621/2022**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಅಕ್ಮಲ್ | ಪ್ರಾ.ಸಾ.3 |
| ತಂದೆಯ/ಗಂಡನ ಹೆಸರು | : | ಅಬ್ದುಲ್ ಸಾಬ್ | ಚಾ.ಸಾ.21 |
| ವಯಸ್ಸು | : | 40 ವರ್ಷ | |
| ಕೆಲಸ | : | ಸೈಕಲ್ ಶಾಪ್‌ನಲ್ಲಿ ಕೆಲಸ | ಸಾ ಪ್ರ ಬೋ |
| ವಾಸ | : | ಹೊಳಲ್ಕೆರೆ | ದಿಃ24.04.2025 |

**ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ**

ನ್ಯಾಯಾಲಯದ ಮುಂದಿರುವ 1 ನೇ ಆರೋಪಿ ಗೊತ್ತಿಲ್ಲ. ಇಂದು ನ್ಯಾಯಾಲಯಕ್ಕೆ ಗೈರು ಹಾಜರಾಗಿರುವ 2 ನೇ ಆರೋಪಿ ಗೊತ್ತಿಲ್ಲ. ಚಾಸಾ.1 ಗೊತ್ತಿಲ್ಲ. ಚಅಶಾ.19 ಮತ್ತು 20 ರವರು ಗೊತ್ತಿಲ್ಲ. ಮೃತ ಅಭಿ ಬಿನ್ ಚಿತ್ತಪ್ಪ ಮತ್ತು ಮೃತ ಮಧು ಬಿನ್ ಈರಪ್ಪ ರವರು ಗೊತ್ತಿಲ್ಲ. ನಾನು ಈ ಪ್ರಕರಣದಕ್ಕೆ ಸಂಬಂಧಿಸಿದಂತೆ ಅಪಘಾತವನ್ನು ನೋಡಿಲ್ಲ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನಾನು ತನಿಖಾಧಿಕಾರಿಗೆ ಯಾವುದೇ ಹೇಳಿಕೆಯನ್ನು ನೀಡಿಲ್ಲ. ನನಗೆ ಈ ಪ್ರಕರಣದ ಕುರಿತು ಯಾವುದೇ ಮಾಹಿತಿ ಇಲ್ಲ.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾರೆ. ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲು ಎ.ಪಿ.ಪಿ.ಯವರಿಂದಃ**

2. ದಿನಾಂಕ 04.03.2021 ರಂದು ನಾನು ಸಂಜೆ 7 ಗಂಟೆ ಸಮಯದಲ್ಲಿ ನನ್ನ ಬೈಕಿನಲ್ಲಿ ಅವಳಹಟ್ಟಿ ಗ್ರಾಮದಿಂದ ಹೊಳಲ್ಕೆರೆ ಟೌನಿಗೆ ವಾಪಸ್ಸು ಬರುತ್ತಿದ್ದೆನು ಎಂದರೆ ಸರಿಯಲ್ಲ. ಆಗ ಹೊಳಲ್ಕೆರೆ -ಅವಳಹಟ್ಟಿ ಮಧ್ಯೆ ಶ್ರೀನಿವಾಸ್ ಅಯ್ಯಂಗಾರ್ ತೋಟದ ಸಮೀಪದ ರಸ್ತೆಯಲ್ಲಿ ನನ್ನ ಮುಂದೆ ಒಂದು ಬೈಕಿನಲ್ಲಿ ಯಾರೋ ಮೂರು ಜನ ಹೊಳಲ್ಕೆರೆ ಕಡೆಗೆ ವೇಗವಾಗಿ ಹೋಗುತ್ತಿದ್ದರು ಎಂದರೆ ಗೊತ್ತಿಲ್ಲ. ಅದೇ ವೇಳೆಯಲ್ಲಿ ಹೊಳಲ್ಕೆರೆ ಕಡೆಯಿಂದ ಒಂದು ಟ್ರಾಕ್ಟರ್ ಮತ್ತು ಟ್ರೈಲರ್ ಬರುತ್ತಿದ್ದು, ಸದರಿ ಟ್ರಾಕ್ಟರಿನ ಚಾಲಕ ಸದರಿ ಟ್ರಾಕ್ಟರ್‌ನ್ನು ಅತೀ ವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ನನ್ನ ಮುಂದೆ ಹೋಗುತ್ತಿದ್ದ ಬೈಕಿಗೆ ಡಿಕ್ಕಿಪಡಿಸಿದ ಪರಿಣಾಮ ಬೈಕಿನಲ್ಲಿದ್ದ ಮೂರು ಜನ ಹುಡುಗರು ಕೆಳಗೆ ಬಿದ್ದರು ಎಂದರೆ ಸರಿಯಲ್ಲ. ಆಗ ಟ್ರಾಕ್ಟರ್ ಮತ್ತು ಟ್ರೈಲರ್‌ನ

ಚಾಲಕನಾದ ನ್ಯಾಯಾಲಯದ ಮುಂದಿರುವ ಆರೋಪಿ ಸದರಿ ವಾಹನವನ್ನು ಅಲ್ಲಿಯೇ ಬಿಟ್ಟು ಓಡಿ ಹೋದ ಎಂದರೆ ಸರಿಯಲ್ಲ. ಆರೋಪಿತನನ್ನು ನಾನು ಈ ಮೊದಲು ಸಹ ನೋಡಿದ್ದೆನು ಎಂದರೆ ಸರಿಯಲ್ಲ. ಬೈಕಿನಿಂದ ಬಿದ್ದಂತಹ ಗಾಯಾಳುಗಳನ್ನು ಉಪಚರಿಸಿ ನೋಡಲಾಗಿ ಅವಳಹಟ್ಟಿ ಗ್ರಾಮದ ಚಿತ್ತಪ್ಪ ಬಿನ್ ನಾಗರಾಜಪ್ಪ ಎಂಬುವವರಿಗೆ ತಲೆಗೆ ಗಾಯವಾಗಿದ್ದು, ಸ್ಥಳದಲ್ಲಿಯೇ ಮೃತಪಟ್ಟಿದ್ದರು ಎಂದರೆ ಸರಿಯಲ್ಲ. ಬೈಕಿನ ಹಿಂಬದಿಯಲ್ಲಿ ಕುಳಿತಿದ್ದ ಅಭಿ ಬಿನ್ ಚಿತ್ತಪ್ಪ ರವರನ್ನು ರಸ್ತೆಯಲ್ಲಿ ಬರುತ್ತಿದ್ದ ವಾಹನದಲ್ಲಿ ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತಾರೆ ಎಂದರೆ ಸರಿಯಲ್ಲ. ಚಿಕಿತ್ಸೆ ಫಲಕಾರಿಯಾಗದೆ ಮಧು ಬಿನ್ ಈರಪ್ಪ ರವರು ಹೊಳಲ್ಕೆರೆಯ ಸರ್ಕಾರಿ ಆಸ್ಪತ್ರೆಯಲ್ಲಿ, ಅಭಿ ಬಿನ್ ಚಿತ್ತಪ್ಪ ರವರು ಶಿವಮೊಗ್ಗದ ಮೆಗ್ಗಾನ್ ಆಸ್ಪತ್ರೆಯಲ್ಲಿ ಮೃತಪಟ್ಟಿರುತ್ತಾರೆ ಎಂದರೆ ಸರಿಯಲ್ಲ. ಅಪಘಾತವು ನ್ಯಾಯಾಲಯದ ಮುಂದಿರುವ 1 ನೇ ಆರೋಪಿತನು ಚಾಲನೆ ಮಾಡುತ್ತಿದ್ದ ಕೆ.ಎ.48-ಟಿ-1365 ರ ಟ್ರಾಕ್ಟರ್ ಚಾಲಕನ ತಪ್ಪಿನಿಂದ ಏರ್ಪಟ್ಟಿರುತ್ತದೆ ಎಂದರೆ ಸರಿಯಲ್ಲ. ಈ ಕುರಿತು ನಾನು ದಿನಾಂಕ 05.03.2021 ರಂದು ತನಿಖಾಧಿಕಾರಿಗೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಅಲ್ಲಗಳೆದ ಹೇಳಿಕೆಯನ್ನು ನಿಪಿ.8 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡುವ ಸಲುವಾಗಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು : ಆರೋಪಿತರ ಪರ :**

ಪಾಟೀ ಸವಾಲು ಇರುವುದಿಲ್ಲ ಎಂದು ಹೇಳಿರುತ್ತಾರೆ.

**ಮರುವಿಚಾರಣೆ : ಇಲ್ಲ**

(ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿಯಿದೆ.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹೊಳಲ್ಕೆರೆ